**ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿರವರ ನ್ಯಾಯಾಲಯ, ಅರಕಲಗೂಡು**

**ಸಿ.ಸಿ.ನಂಃ623/2018**

ಫಿರ್ಯಾದಿ :- ಆರಕ್ಷಕ ಉಪ-ನಿರೀಕ್ಷಕರು,
ಅರಕಲಗೂಡು ಪೊಲೀಸ್ ಠಾಣೆ,
ಅರಕಲಗೂಡು

ವಿರುದ್ಧ

ಆರೋಪಿ :- ಜಯಮ್ಮ

**:: ದೋಷಾರೋಪಣೆ ::**

ಶ್ರೀ.ಯೋಗೇಶ್, ಎಂ.ಎ. ಎಲ್.ಎಲ್.ಬಿ., ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ, ಅರಕಲಗೂಡು ಆದ ನಾನು,

ಜಯಮ್ಮ ಕೋಂ ಲೇಟ್ ಈರಯ್ಯ, 55 ವರ್ಷ,
ಮುತ್ತಿಗೆ ಗ್ರಾಮ, ಕಸಬಾ ಹೋಬಳಿ,
ಅರಕಲಗೂಡು ತಾಲ್ಲೂಕು

ಆರೋಪಿಯಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ-

ದಿಃ18/05/2018 ರಂದು ಮಧ್ಯಾಹ್ನ 12-30 ಗಂಟೆ ಸಮಯದಲ್ಲಿ ಅರಕಲಗೂಡು ಪೊಲೀಸ್ ಠಾಣಾ ವ್ಯಾಪ್ತಿಯ ಮುತ್ತಿಗೆ ಗ್ರಾಮದ ಸಾಕ್ಷಿ-1 ರವರು ತಮ್ಮ ಬಾಬ್ತು ಸ.ನಂಃ130/3 ರಲ್ಲಿ ಟ್ರಾಕ್ಟರ್ ನಲ್ಲಿ ಉಳುಮೆ ಮಾಡುತ್ತಿದ್ದಾಗ ಆರೋಪಿಯಾದ ನೀವು ಏಕಾಏಕಿ ಜಗಳ ತೆಗೆದಿರುತ್ತೀರಿ ಎಂದು ನಿಮ್ಮ ಮೇಲೆ ಆಪಾದನೆ ಇದ್ದು, ನೀವು ಭಾ.ದಂ.ಸಂ.ಕಲಂಃ341 ರ ಅಡಿಯಲ್ಲಿ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಎರಡನೆಯದಾಗಿ ಮೇಲೆ ಹೇಳಿದ ದಿನ, ಸಮಯ ಹಾಗೂ ಸಂದರ್ಭಗಳಂದು ಆರೋಪಿಯಾದ ನೀವು ಏಕಾಏಕಿ ಜಗಳ ತೆಗೆದು ಈ ಜಮೀನು ನಮಗೆ ಸೇರಬೇಕೆಂದು ಸಾಕ್ಷಿ-1 ರವರಿಗೆ ಸೂಳೆಮುಂಡೆ, ಕತ್ತೆಮುಂಡೆ ಎಂದು ಅವಾಚ್ಯ ಶಬ್ದಗಳಿಂದ ಬೈದಿರುತ್ತೀರಿ ಎಂದು ನಿಮ್ಮ ಮೇಲೆ ಆಪಾದನೆ ಇದ್ದು, ನೀವು ಭಾ.ದಂ.ಸಂ.ಕಲಂಃ504 ರ ಅಡಿಯಲ್ಲಿ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಮೂರನೆಯದಾಗಿ ಮೇಲೆ ಹೇಳಿದ ದಿನ, ಸಮಯ ಹಾಗೂ ಸಂದರ್ಭಗಳಂದು ಆರೋಪಿಯಾದ ನೀವು ಸಾಕ್ಷಿ-1 ರವರ ಮೈ-ಕೈಗೆ ಮತ್ತು ಎದೆಗೆ ಕೈಯಿಂದ ಹೊಡೆದು, ಬಲಗೈ ಕಿರುಬೆರಳನ್ನು ಕಚ್ಚಿ ಸಾಮಾನ್ಯ ಸ್ವರೂಪದ ನೋವುಂಟು ಪಡಿಸಿರುತ್ತೀರಿ ಎಂದು ನಿಮ್ಮ ಮೇಲೆ ಆಪಾದನೆ ಇದ್ದು, ನೀವು ಭಾ.ದಂ.ಸಂ.ಕಲಂಃ323 ರ ಅಡಿಯಲ್ಲಿ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಮೇಲೆ ಹೇಳಿದ ದೋಷಾರೋಪಣೆಯನ್ನು ಆರೋಪಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ನನ್ನ ಸಮಕ್ಷಮದಲ್ಲಿ ಪಡೆದುಕೊಳ್ಳಲಾಯಿತು.

ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ.,
ಅರಕಲಗೂಡು

1. ನಿಮಗೆ ಮೇಲೆ ವಿವರಿಸಲಾದ ಆಪಾದನೆಯ ವಿವರಗಳು ತಿಳಿಯಿತೇ?

ಉತ್ತರಃ-

2. ಮೇಲೆ ಓದಿ ಹೇಳಿದ ಆಪಾದನೆಯನ್ನು ಒಪ್ಪಿಕೊಳ್ಳುತ್ತೀರಾ ಅಥವಾ ವಿಚಾರಣೆಯಾಗಬಯಸುವಿರಾ?

ಉತ್ತರಃ-

ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಂಫ್.ಸಿ.
ಅರಕಲಗೂಡು.